ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಮಾತಂವಿ/42/ಸೇವಾಸಿಂಧು/2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-೦೧,
ದಿನಾಂಕ: 12.08.2020

## ಸುತ್ತೋಲೆ

ಕಾಲೇಜು ಶಿಕ್ಷಣ ಇಲಾಖೆಯು ರಾಜ್ಯ ಸರ್ಕಾರ ರೂಪಿಸಿರುವ "ಸೇವಾ ಸಿಂಧು" ಯೋಜನೆಯಡಿ 06 ಸೇವೆಗಳನ್ನು ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳಿಗೆ ನಗದು ರಹಿತ ಮತ್ತು ಕಾಗದ ರಹಿತ ವಿಧಾನದಲ್ಲಿ ತಲುಪಿಸುತ್ತಿದೆ. ಸದರಿ ಯೋಜನೆ ವಿದ್ಯಾರ್ಥಿಗಳಿಗೆ ಸೇವಾ ಸ್ವೀಕೃತಿ ಪ್ರಕ್ರಿಯೆಯನ್ನು ಸರಳೀಕರಿಸಲು ಸಹಕಾರಿಯಾಗಿದೆ.

ಈ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸ್ವೀಕೃತವಾಗುವ ಆನ್‌ಲೈನ್ ಅರ್ಜಿಗಳನ್ನು ಸೇವಾಸಿಂಧು ಇ-ಪೋರ್ಟಲ್‌ನಲ್ಲಿ ಪರಿಷ್ಕರಿಸಿ, ಆನ್‌ಲೈನ್ ಮೂಲಕವೇ ಅಪೇಕ್ಷಿತ ಸೇವೆಗಳು ವಿದ್ಯಾರ್ಥಿಗಳಿಗೆ ತಲುಪುವಂತೆ ಕ್ರಮವಹಿಸಲು ಸೂಚಿಸಿದೆ. ಹಾಗು "ಸೇವಾ ಸಿಂಧು" ಯೋಜನೆಗೆ ವ್ಯಾಪಕ ಪ್ರಚಾರ ನೀಡಲು, ಹಾಗು ವಿದ್ಯಾರ್ಥಿಗಳು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಂಡು ನೇರವಾಗಿ ಸೇವೆಗಳನ್ನು ಪಡೆಯುವುದರ ಬಗ್ಗೆ ತಿಳಿಸುವುದು. ಕಾಲೇಜಿನ ಪ್ರಾಂಗಣದಲ್ಲಿ ಸೇವಾ ಸಿಂಧು ನೋಟಿಸ್ ಬೋರ್ಡ್ ಅನ್ನು ಸ್ಥಾಪಿಸಿ, ಪ್ರದರ್ಶಿಸಲು ಸೂಚಿಸಲಾಗಿದೆ. ಆನ್‌ಲೈನ್‌ನಲ್ಲಿ ಬಂದಂತಹ ಅರ್ಜಿಗಳನ್ನು ಅತ್ಯಂತ ತ್ವರಿತವಾಗಿ ವಿಲೇವಾರಿ ಮಾಡಲು ಸೂಕ್ತಕ್ರಮವಹಿಸಲು ಸೂಚಿಸಿದೆ.

ಮುಂದುವರೆದು ಈಗಾಗಲೇ ವಿವಿಧ ಕಾಲೇಜುಗಳ ಹಂತದಲ್ಲಿ ಬಾಕಿ ಇರುವ ಸುಮಾರು 872 ಅರ್ಜಿಗಳನ್ನು ಈ ಕೂಡಲೇ ವಿಲೇವಾರಿಗೊಳಿಸುವಂತೆ ಕ್ರಮಕೈಗೊಳ್ಳಲು ಸೂಚಿಸಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಪ್ರತಿಗಳು:

೧. ರಾಜ್ಯದ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಜಂಟಿ ನಿರ್ದೇಶಕರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ - ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
೨. ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
೩. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಅಯುಕ್ತರ ಕಛೇರಿ, ಬೆಂಗಳೂರು- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.